c) Yes.

ಕುಣಿಗಲ್ ಪಟ್ಟಣಕ್ಕೆ ಕುಡಿಯುವ ನೀರಿನ ಸರಬರಾಜು

447 (768) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್):- ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಕರ್ನಾಟಕ ನಗರ ನೀರು ಸರಬರಾಜು ಯೋಜನೆಯಡಿ ಕುಣಿಗಲ್ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ?

2. ಹಾಗಿದ್ದಲ್ಲಿ ಅದು ಯಾವ ಹಂತದಲ್ಲಿದೆ?

ಶ್ರೀ ಬಿ.ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು)

1. ಇದೆ.

2. ಕೊಳವೆ ಬಾವಿಗಳು ಮೂಲವಾಗಿರುವ ರೂ. 158.04 ಲಕ್ಷ ಮೊತ್ತದ ಮೊದಲ ಪ್ರಸ್ತಾವನೆಯನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಸದ್ಯದಲ್ಲಿಯೇ ಸರ್ಕಾರಕ್ಕೆ ಮತ್ತು ಹುಡ್ಕೋ ಸಂಸ್ಥೆಗೆ ಸಲ್ಲಿಸಲಿದೆ.

ಎರಡನೆಯ ಪರ್ಯಾಯ ಪ್ರಸ್ತಾವನೆಯು ಓ.ಇ.ಸಿ.ಎಫ್. ಹಾಗೂ ಭಾರತ ಸರ್ಕಾರದ ಪರಿಶೀಲನೆಯಲ್ಲಿದೆ.

ತುಮಕೂರು ಹಾಗೂ ಕುಣಿಗಲ್ ಜಿಲ್ಲೆಗಳಲ್ಲಿ ಗಂಗಾ ಕಲ್ಯಾಣ ಯೋಜನೆ

448 (769) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್)

1. ತುಮಕೂರು ಜಿಲ್ಲೆಯ ಹಾಗೂ ಪ್ರತ್ಯೇಕವಾಗಿ ಕುಣಿಗಲ್ ಕ್ಷೇತ್ರದಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ಹಾಗೂ ಎಷ್ಟು ಜನರು ಪ್ರಯೋಜನ ಪಡೆದಿದ್ದಾರೆ?

ಶ್ರೀ ಮಾಲಿಕಯ್ಯ ವಿ. ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

1. ತುಮಕೂರು ಜಿಲ್ಲೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ 32 ಘಟಕಗಳನ್ನು ಗುರ್ತಿಸಲಾಗಿದ್ದು, 179 ಹಿಂದುಳಿದ ವರ್ಗಗಳ ಜನರು ಪ್ರಯೋಜನ ಪಡೆಯಲಿದ್ದಾರೆ. ಈ ಪೈಕಿ 7 ಕೊಳವೆಬಾವಿಗಳನ್ನು ಕೊರೆದಿದ್ದು ಇದರಿಂದ 29 ಫಲಾನುಭವಿಗಳಿಗೆ ಅನುಕೂಲವಾಗಲಿದೆ. ಕುಣಿಗಲ್ ಕ್ಷೇತ್ರಕ್ಕೆ ಸೀಮಿತಗೊಂಡಂತೆ ಒಂದು ಘಟಕವನ್ನು ಪಿ.ಹೆಚ್. ಹಳ್ಳಿಯಲ್ಲಿ ಗುರುತಿಸಿದ್ದು, 10 ಹಿಂದುಳಿದ ವರ್ಗಗಳ 23.17 ಎಕರೆ ಜಮೀನಿಗೆ ನೀರಾವರಿ ಸೌಲಭ್ಯ ಒದಗಿಸಲಾಗುತ್ತಿದೆ.